# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : **361**

ಸದಸ್ಯರ ಹೆಸರು : ಡಾ|| ವೈ.ಎ.ನಾರಾಯಣಸ್ವಾಮಿ
(ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 15.12.2021.

ಉತ್ತರಿಸುವ ಸಚಿವರು : ಕಂದಾಯ ಸಚಿವರು

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶಗಳ ಸುತ್ತಲಿನ ವ್ಯಾಪ್ತಿಯಲ್ಲಿ ಸರ್ಕಾರದ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಇರುವ ಹಲವು ಗೋಮಾಳ ಮತ್ತು ಸರ್ಕಾರಿ ಜಮೀನುಗಳು ಖಾಸಗಿಯವರಿಂದ ಅತಿಕ್ರಮಗೊಳಿಸಲ್ಪಟ್ಟಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಜಮೀನುಗಳ ವಿಸ್ತೀರ್ಣ ಎಷ್ಟು; (ಸಂಪೂರ್ಣ ವಿವರಗಳನ್ನು ಒದಗಿಸುವುದು)</td><td>ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯಲ್ಲಿ ಗೋಮಾಳ ಮತ್ತು ಸರ್ಕಾರಿ ಜಮೀನು ಖಾಸಗಿಯವರಿಂದ ಅತಿಕ್ರಮಿಸಲ್ಪಟ್ಟಿರುವ ವಿವರಗಳು ಈ ಕೆಳಗಿನಂತಿರುತ್ತದೆ.
<table>
<tr><th>ಜಿಲ್ಲೆ</th><th>ಪ್ರಕರಣಗಳ ಸಂಖ್ಯೆ</th><th>ವಿಸ್ತೀರ್ಣ ಎಕರೆ/ಗುಂಟೆ</th></tr>
<tr><td>ಬೆಂಗಳೂರು ನಗರ</td><td>14,660</td><td>38,888-22.01</td></tr>
<tr><td>ಬೆಂ.ಗ್ರಾಮಾಂತರ</td><td>38,546</td><td>36,229</td></tr>
</table>
(ತಾಲ್ಲೂಕುವಾರು ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ)</td></tr>
<tr><td>ಆ)</td><td>ಅತಿಕ್ರಮಿಸಲ್ಪಟ್ಟಿರುವ ಜಮೀನುಗಳ ಪೈಕಿ ಎಷ್ಟು ಪ್ರಕರಣಗಳಲ್ಲಿ ಸರ್ಕಾರದಿಂದ ಎಷ್ಟು ವಿಸ್ತೀರ್ಣದ ಜಮೀನನ್ನು ವಶಕ್ಕೆ ಪಡೆಯಲಾಗಿದೆ; (ವಿವರ ನೀಡುವುದು)</td><td>ಅತಿಕ್ರಮಿಸಲ್ಪಟ್ಟಿರುವ ಜಮೀನುಗಳ ಪೈಕಿ ಸರ್ಕಾರದ ವಶಕ್ಕೆ ಪಡೆದಿರುವ ಗೋಮಾಳ ಮತ್ತು ಸರ್ಕಾರಿ ಜಮೀನಿನ ವಿವರ ಈ ಕೆಳಗಿನಂತಿರುತ್ತದೆ.
<table>
<tr><th>ಜಿಲ್ಲೆ</th><th>ಪ್ರಕರಣಗಳ ಸಂಖ್ಯೆ</th><th>ವಿಸ್ತೀರ್ಣ ಎಕರೆ/ಗುಂಟೆ</th></tr>
<tr><td>ಬೆಂಗಳೂರು ನಗರ</td><td>4,940</td><td>16420-06.01</td></tr>
<tr><td>ಬೆಂ.ಗ್ರಾಮಾಂತರ</td><td>10,892</td><td>11,779</td></tr>
</table>
(ವಿವರ ಅನುಬಂಧ-2 ರಲ್ಲಿ ಒದಗಿಸಲಾಗಿದೆ)</td></tr>
</table>

| | | |
|---|---|---|
| ೩) | ಅತಿಕ್ರಮಿಸಲ್ಪಟ್ಟ ಜಮೀನುಗಳನ್ನು ಸರ್ಕಾರದ ವಶಕ್ಕೆ ಪಡೆಯಲು ಸರ್ಕಾರಕ್ಕಿರುವ ತೊಡಕುಗಳೇನು? | ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯ ಪಡೆಗಳನ್ನು ರಚಿಸಲಾಗಿದೆ. ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು ಕಾಲಬದ್ಧ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಒತ್ತುವರಿ ಆಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸುತ್ತಿದ್ದಾರೆ.<br><br>ರಾಜ್ಯದಲ್ಲಿ ಒಟ್ಟು 62,72,811 ಎಕರೆ ಸರ್ಕಾರಿ ಜಮೀನು ಇದೆ. ಇದರಲ್ಲಿ ಒಟ್ಟು 14,27,195 ಎಕರೆ ಸರ್ಕಾರಿ ಜಮೀನು ಒತ್ತುವರಿ ಇದೆ. ವಿವಿಧ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳ ಒಟ್ಟು ವಿಸ್ತೀರ್ಣ 9,732 ಎಕರೆ, ಅಕ್ರಮ-ಸಕ್ರಮ ಯೋಜನೆಯಡಿಯಲ್ಲಿ ಅರ್ಜಿ ಸಲ್ಲಿಸಿರುವ ಒಟ್ಟು ವಿಸ್ತೀರ್ಣ 9,97,198 ಎಕರೆ ಹಾಗೂ ಸಾರ್ವಜನಿಕ ಉದ್ದೇಶಗಳಿಗೆ ಬಳಕೆಯಾಗಿರುವ ಒಟ್ಟು ವಿಸ್ತೀರ್ಣ 14,048 ಎಕರೆ ಸರ್ಕಾರಿ ಜಮೀನು ಹೊರತುಪಡಿಸಿ, ಉಳಿದಂತೆ 4,06,217 ಎಕರೆ ಒತ್ತುವರಿ ಜಮೀನು ತೆರವುಗೊಳಿಸಬೇಕಾಗಿರುತ್ತದೆ. ಇದರಲ್ಲಿ 30-11-2021 ರವರೆಗೂ 2,70,108 ಎಕರೆ ಸರ್ಕಾರಿ ಜಮೀನು ತೆರವುಗೊಳಿಸಲಾಗಿದೆ. ಉಳಿದಂತೆ 1,36,109 ಎಕರೆ ಒತ್ತುವರಿ ತೆರವುಗೊಳಿಸಲು ಬಾಕಿ ಇದ್ದು, ಹಂತ ಹಂತವಾಗಿ ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಸಲುವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ರಚಿಸಲಾಗಿದೆ. ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲದಲ್ಲಿ ಪ್ರಕರಣವನ್ನು ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 192-ಎ ರನ್ವಯ ದಾಖಲಿಸಲಾಗುತ್ತಿದೆ. ವಿವರಗಳು ಈ ಕೆಳಗಿನಂತಿದೆ. (03.12.2021ರಂತೆ)<br>1.ದಾಖಲಾಗಿರುವ ಪ್ರಕರಣ : 20841<br>2.ಇತ್ಯರ್ಥಪಡಿಸಿದ ಪ್ರಕರಣ : 4712<br>3.ಬಾಕಿ ಇರುವ ಪ್ರಕರಣ : 16129<br>4.ತೆರವುಗೊಳಿಸಲು ಆದೇಶಿಸಲಾಗಿರುವ ವಿಸ್ತೀರ್ಣ:2587-12 ¾ ಎ/ಗು<br>5.ಒತ್ತುವರಿಯಿಂದ ತೆರವುಗೊಳಿಸಿದ ಜಮೀನು:1023-22 ಎ/ಗು.<br>6.ಶಿಕ್ಷೆ ವಿಧಿಸಲಾಗಿರುವ ಪ್ರಕರಣಗಳ ಸಂಖ್ಯೆ:61 ಜನರಿಗೆ ಒಂದು ವರ್ಷದಂತೆ ಶಿಕ್ಷೆ ವಿಧಿಸಲಾಗಿದೆ ಹಾಗೂ ದಂಡ ವಿಧಿಸಲಾಗಿದೆ. |

ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 20 ಎಲ್‌ಜಿಪಿ 2020; ದಿನಾಂಕ:20.01.2020 ರಂತೆ ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು/ಭೂ ಕಬಳಿಕೆಗೆ ದುಷ್ಪ್ರೇರಣೆ ನೀಡಲು ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾಗಿರುವ ಅಧಿಕಾರಿ/ಸಿಬ್ಬಂದಿ ಗಳ ವಿರುದ್ಧ ಕಾನೂನು/ಶಿಸ್ತು ಕ್ರಮಗಳನ್ನು ಜರುಗಿಸಲು ಸೂಚನೆ ನೀಡಲಾಗಿದೆ.

ರಾಜ್ಯದಲ್ಲಿರುವ ಸರ್ಕಾರಿ ಜಮೀನುಗಳ ಒತ್ತುವರಿ ತೆರವುಗೊಳಿಸಲು ಹಾಗೂ ಸಂರಕ್ಷಿಸಲು ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 15 ಎಲ್‌ಜಿಪಿ 2020; ದಿನಾಂಕ: 29.01.2020 ರ ಆದೇಶದ ಮೂಲಕ ಏಳು ಸದಸ್ಯರುಗಳನ್ನೊಳಗೊಂಡಂತೆ "ಸರ್ಕಾರಿ ಜಮೀನುಗಳ ಸಂರಕ್ಷಣಾ ಸಮಿತಿ" ಯನ್ನು ರಚಿಸಲಾಗಿದೆ. ಸದರಿ ಸಮಿತಿಯು ಜಿಲ್ಲೆಗಳ ಸರ್ಕಾರಿ ಜಮೀನುಗಳಿಗೆ ಸಂಬಂಧಿಸಿದಂತೆ ಪ್ರತಿ ವಾರವೂ ಪರಿಶೀಲನಾ ಸಭೆಯನ್ನು ನಡೆಸುತ್ತಿದ್ದು, ಭೂ ಕಬಳಿಕೆ ತಡೆಯುವ ನಿಟ್ಟಿನಲ್ಲಿ ಅಗತ್ಯ ನಿರ್ದೇಶನಗಳನ್ನು ಸರ್ಕಾರಕ್ಕೆ ಕಾಲಕಾಲಕ್ಕೆ ನೀಡಲಾಗುತ್ತಿದೆ.

- ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ಮಾಡುತ್ತಿರುವ ಸಾಗುವಳಿಯನ್ನು ಸಕ್ರಮಗೊಳಿಸಲು ನಮೂನೆ-50, ನಮೂನೆ-53 ಮತ್ತು ನಮೂನೆ-57 ರಲ್ಲಿ ಸ್ವೀಕರಿಸಿರುವ ಅರ್ಜಿಗಳ ಹಾಗೂ ಸರ್ಕಾರದ ಜಮೀನುಗಳಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸುವ ಸಲುವಾಗಿ ಕಲಂ 94ಸಿ ಹಾಗೂ 94ಸಿಸಿ ರಡಿಯಲ್ಲಿ ಸ್ವೀಕೃತವಾಗಿರುವ ಅರ್ಜಿಗಳ ವಿವರ ಈ ಕೆಳಗಿನಂತಿರುತ್ತದೆ.

| ಬೆಂಗಳೂರು ನಗರ ಜಿಲ್ಲೆ | | | |
|---|---|---|---|
| ವಿವರ | ಸ್ವೀಕರಿಸಿದ ಅರ್ಜಿಗಳ ಸಂಖ್ಯೆ: | ಇತ್ಯರ್ಥಪಡಿಸಿದ ಅರ್ಜಿಗಳ ಸಂಖ್ಯೆ: | ಬಾಕಿ ಅರ್ಜಿಗಳ ಸಂಖ್ಯೆ: |
| ನಮೂನೆ 50 | 23200 | 19003 | 4197 |
| ನಮೂನೆ 53 | 19773 | 15801 | 3972 |
| ನಮೂನೆ 57 | 5777 | 0 | 5777 |
| ಕಲಂ 94-ಸಿ | 3420 | 2858 | 562 |
| ಕಲಂ 94-ಸಿಸಿ | 54309 | 47794 | 6515 |

| ಬೆಂಗಳೂರು ಗ್ರಾಮಾಂತರ ಜಿಲ್ಲೆ | | | |
|---|---|---|---|
| ವಿವರ | ಸ್ವೀಕರಿಸಿದ ಅರ್ಜಿಗಳ ಸಂಖ್ಯೆ: | ಇತ್ಯರ್ಥಪಡಿಸಿದ ಅರ್ಜಿಗಳ ಸಂಖ್ಯೆ: | ಬಾಕಿ ಅರ್ಜಿಗಳ ಸಂಖ್ಯೆ: |
| ನಮೂನೆ 50 | 24303 | 24303 | 0 |
| ನಮೂನೆ 53 | 38582 | 37907 | 675 |
| ನಮೂನೆ 57 | 18017 | 112 | 17095 |
| ಕಲಂ 94-ಸಿ | 15429 | 15421 | 8 |
| ಕಲಂ 94-ಸಿಸಿ | 11592 | 11190 | 402 |

ವಿವಿಧ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳು ,ಅಕ್ರಮ-ಸಕ್ರಮ ಯೋಜನೆಯಡಿಯಲ್ಲಿ ಅರ್ಜಿ ಸಲ್ಲಿಸಿರುವ ಪ್ರಕರಣಗಳು ಹಾಗೂ ಸಾರ್ವಜನಿಕ ಉದ್ದೇಶಗಳಿಗೆ ಬಳಕೆಯಾಗಿರುವ ಸರ್ಕಾರಿ ಜಮೀನು ಹೊರತುಪಡಿಸಿ, ಉಳಿದಂತೆ 4,06,217 ಎಕರೆ ಒತ್ತುವರಿ ಜಮೀನು ತೆರವುಗೊಳಿಸಬೇಕಾಗಿರುತ್ತದೆ. ಇದರಲ್ಲಿ 30-11-2021 ರವರೆಗೂ 2,70,108 ಎಕರೆ ಸರ್ಕಾರಿ ಜಮೀನು ತೆರವುಗೊಳಿಸಲಾಗಿದೆ. ಉಳಿದಂತೆ 1,36,109 ಎಕರೆ ಒತ್ತುವರಿ ತೆರವುಗೊಳಿಸಲು ಬಾಕಿ ಇದ್ದು, ಹಂತ ಹಂತವಾಗಿ ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಆರ್‌ಡಿ 221 ಎಲ್‌ಜಿಕ್ಯೂ 2021

(ಆರ್. ಅಶೋಕ)

ಕಂದಾಯ ಸಚಿವರು.

# ಅನುಬಂಧ–01

| ಕ್ರಸಂ | ಜಿಲ್ಲೆ | ತಾಲ್ಲೂಕು | ಗೋಮಾಳ ಮತ್ತು ಸರ್ಕಾರಿ ಜಮೀನುಗಳು ಖಾಸಗಿಯವರಿಂದ ಅತಿಕ್ರಮಿಸಿರುವ ಪ್ರಕರಣಗಳ ಸಂಖ್ಯೆ | ವಿಸ್ತೀರ್ಣ(ಎ/ಗುಂ) |
|---|---|---|---|---|
| 1 | ಬೆಂಗಳೂರು ನಗರ | ಬೆಂಗಳೂರು ಉತ್ತರ | 660 | 3054–13.15 |
| | | ಬೆಂಗಳೂರು ದಕ್ಷಿಣ | 6759 | 8084–10.15 |
| | | ಬೆಂಗಳೂರು ಪೂರ್ವ | 4762 | 4455–19.06 |
| | | ಯಲಹಂಕ | 1253 | 12741–24.12 |
| | | ಆನೇಕಲ್ | 1226 | 10552–33.01 |
| ಒಟ್ಟು | | | **14660** | **38888–22.01** |
| 2 | ಬೆಂಗಳೂರು ಗ್ರಾಮಾಂತರ | ದೇವನಹಳ್ಳಿ | 2524 | 2649 |
| | | ದೊಡ್ಡಬಳ್ಳಾಪುರ | 13328 | 13794 |
| | | ಹೊಸಕೋಟೆ | 12758 | 11347 |
| | | ನೆಲಮಂಗಲ | 9936 | 8439 |
| ಒಟ್ಟು | | | **38546** | **36229** |
| | | | | |

# ಅನುಬಂಧ–02

| ಕ್ರ.ಸಂ | ಜಿಲ್ಲೆ | ತಾಲ್ಲೂಕು | ಅತಿಕ್ರಮಣ ತೆರವುಗೊಳಿಸಿದ ಪ್ರಕರಣಗಳ ಸಂಖ್ಯೆ | ವಿಸ್ತೀರ್ಣ(ಎ/ಗುಂ) |
|---|---|---|---|---|
| 1 | ಬೆಂಗಳೂರು ನಗರ | ಬೆಂಗಳೂರು ಉತ್ತರ | 310 | 49–17.00 |
| | | ಬೆಂಗಳೂರು ದಕ್ಷಿಣ | 1967 | 2709–23.15 |
| | | ಬೆಂಗಳೂರು ಪೂರ್ವ | 1591 | 2281–12.02 |
| | | ಯಲಹಂಕ | 310 | 3546–36.12 |
| | | ಆನೇಕಲ್ | 762 | 1217–17.00 |
| ಒಟ್ಟು | | | **4940** | **16420–06.01** |
| 2 | ಬೆಂಗಳೂರು ಗ್ರಾಮಾಂತರ | ದೇವನಹಳ್ಳಿ | 2128 | 2340–00 |
| | | ದೊಡ್ಡಬಳ್ಳಾಪುರ | 3226 | 3458–00 |
| | | ಹೊಸಕೋಟೆ | 4216 | 4603–00 |
| | | ನೆಲಮಂಗಲ | 1322 | 1378–00 |
| ಒಟ್ಟು | | | **10892** | **11779** |
| | | | | |